ಪಿ ಡಬ್ಲ್ಯೂಃ 1

ಇಂದು ದಿನಾಂಕಃ 17.01.2020 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ಮಾಡಿಸಲಾಯಿತು.

**<u>ಮುಖ್ಯ ವಿಚಾರಣೆಃ</u>** ವಾದಿಗಳ ಪರ ಶ್ರೀ ಬಿ ಕೆ ಎಸ್ ವಕೀಲರಿಂದಃ

ನಾನು ನನ್ನ ಮೌಖಿಕ ವಿಚಾರಣೆಯ ಬದಲಾಗಿ ನನ್ನ ಸಾಕ್ಷಿ ಪ್ರಮಾಣ ಪತ್ರ ಹಾಜರುಪಡಿಸಿರುತ್ತೇನೆ. ಅದರಲ್ಲಿ ಬರೆದಿರುವ ಎಲ್ಲ ಅಂಶಗಳನ್ನು ನಾನೇ ಖುದ್ದಾಗಿ ವಕೀಲರಿಗೆ ತಿಳಿಯಿಸಿ, ಬರೆಯಿಸಿರುತ್ತೇನೆ. ಅದರಲ್ಲಿರುವ ಅಂಶಗಳೆಲ್ಲವೂ ನಿಜವಿದ್ದು, ಅದರಲ್ಲಿರುವ ಸಹಿಯು ನನ್ನದೇ ಆಗಿರುತ್ತದೆ. ಈ ಕೆಳಕಂಡ ದಾಖಲಾತಿಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ನಿಶಾನೀಕರಿಸಬೇಕೆಂದು ವಿನಂತಿಸಿಕೊಳ್ಳುತ್ತೇನೆ.

3 ಕರನಿರ್ಧಾರಣಾ ಪಟ್ಟಿಗಳ ದೃಢೀಕೃತ ಪ್ರತಿಗಳನ್ನು ಹಾಜರು ಮಾಡಿದ್ದು ನಿಪಿ-1 ರಿಂದ 3 ಎಂದು, ಠರಾವಿನ ನಕಲಿನ ಪ್ರತಿಯನ್ನು ಹಾಜರು ಮಾಡಿದ್ದು ಅದನ್ನು ನಿಪಿ-4 ಎಂದು , ಅಪ್‌ಸಾತ್ ವಾಟ್ನಿಯ ದೃಢೀಕೃತ ನಕಲನ್ನು ಹಾಜರು ಮಾಡಿದ್ದು ಅದನ್ನು ನಿಪಿ-5 ಎಂದು, 4 ಮರಣ ಪ್ರಮಾಣ ಪತ್ರವನ್ನು ಹಾಜರು ಮಾಡಿದ್ದು ಅವುಗಳನ್ನು ನಿಪಿ-6 ರಿಂದ 9 ಎಂದು, 8 ಕರನಿರ್ಧರಣಾ ಪಟ್ಟಿಯ ದೃಢೀಕೃತ ನಕಲನ್ನು ಹಾಜರು ಮಾಡಿದ್ದು ಅದನ್ನು ನಿಪಿ-10 ರಿಂದ ನಿಪಿ-17 ಎಂದು, ಸಭೆಯ ದೃಢೀಕೃತ ಪ್ರತಿಯನ್ನು ಹಾಜರು ಮಾಡಿದ್ದು ಅದನ್ನು ನಿಪಿ-18 ಎಂದು, 1 ನೇ ವಾದಿಯು ಗ್ರಾಮ ಪಂಚಾಯತಿ ಮಕರಿಯವರಿಗೆ ನೀಡಿದ ಅರ್ಜಿಯ ದೃಢೀಕೃತ ಪ್ರತಿಯನ್ನು ಹಾಜರು ಮಾಡಿದ್ದು ಅದನ್ನು ನಿಪಿ-19 ಎಂದು ಗುರುತಿಸಲಾಯಿತು.

**<u>ಪಾಟೀ ಸವಾಲುಃ</u>** ಪ್ರತಿವಾದಿಯ ಪರ ಶ್ರೀ ಎಂ ಬಿ ಪಿ ವಕೀಲರಿಂದಃ

ಪಾಟೀ ಸವಾಲಿಗೆ ವಕೀಲರು ಸಮಯಾವಕಾಶ ಕೋರಿದ್ದು, ಪಾಟೀ ಸವಾಲನ್ನು ಮುಂದೂಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಗಣಕ ಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು)

ನನ್ನ ಸಮಕ್ಷಮ

Sd/-xx

ಓ ಹೇ ಕೇ ಸರಿ ಇದೆ. ಹೆಚ್ಚುವರಿ ಸಿ.ಜೆ. ಮತ್ತು ಜೆ.ಎಮ್.ಎಫ್.ಸಿ.,

ಹಿರೇಕೆರೂರು.